I/349182/2022

**ಕರ್ನಾಟಕ ಸರ್ಕಾರ**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ, ಮಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು-560052.**

ಸಂ:E-947501-BCWD-16012/27/2022-_TRAINING ದಿನಾಂಕ:05.12.2022

**ಪ್ರಕಟಣೆ**

2022-23ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಉಚಿತವಾಗಿ ನೀಡುವ NEET ಹಾಗೂ JEE (MAINS & ADVANCED) ಪರೀಕ್ಷಾ ಪೂರ್ವ ತರಬೇತಿಗಳಿಗಾಗಿ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಹಾಗೂ 3ಬಿ ಗಳಿಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಂದ Online ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಬೆಂಗಳೂರು, ಮೈಸೂರು, ಹುಬ್ಬಳ್ಳಿ- ಧಾರವಾಡ ಮತ್ತು ಕಲಬುರಗಿ ನಗರಗಳಲ್ಲಿ ವಿಜ್ಞಾನ ವಿಭಾಗದಲ್ಲಿ ಪ್ರಥಮ ಪಿ.ಯು.ಸಿ/10+1 ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ. Online ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:19.12.2022 ಸಂಜೆ 5:00 ಗಂಟೆ ಆಗಿದ್ದು, ಹೆಚ್ಚಿನ ವಿವರಗಳಿಗಾಗಿ ಇಲಾಖಾ ವೆಬ್‌ಸೈಟ್ **https://bcwd.karnataka.gov.in** ಅನ್ನು ನೋಡಲು ತಿಳಿಸಿದೆ.

**ವಿಶೇಷ ಸೂಚನೆ:-**

ಸದರಿ ಪರೀಕ್ಷಾ ಪೂರ್ವ ತರಬೇತಿಗಳಿಗೆ ಸಂಬಂಧಿಸಿದಂತೆ NEET ಹಾಗೂ JEE (MAINS & ADVANCED) ಪರೀಕ್ಷಾ ಪೂರ್ವ ತರಬೇತಿಗಳನ್ನು ಬೆಂಗಳೂರು, ಮೈಸೂರು, ಹುಬ್ಬಳ್ಳಿ-ಧಾರವಾಡ ಮತ್ತು ಕಲಬುರಗಿ ನಗರಗಳಲ್ಲಿ ಮಾತ್ರ ನೀಡಲಿದ್ದು, ಅಭ್ಯರ್ಥಿಗಳು ತರಬೇತಿಗೆ ನಿಯಮಿತವಾಗಿ ಹಾಜರಾಗಬೇಕು. ಸರ್ಕಾರ ಕಾಲಕಾಲಕ್ಕೆ ನೀಡುವ ನಿರ್ದೇಶನದಂತೆ ಸದರಿ ಕೋಚಿಂಗ್ ಅನ್ನು ಕ್ಲಾಸ್‌ರೂಂ (ಆಫ್‌ಲೈನ್) ಅಥವಾ ಆನ್‌ಲೈನ್ ಮೂಲಕ ನೀಡಲಾಗುವುದು.

**<u>ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳ ಸಾಮಾನ್ಯ ಅರ್ಹತೆ ಮತ್ತು ಸೂಚನೆಗಳು:</u>**

- ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು.
- ಕರ್ನಾಟಕ ಸರ್ಕಾರ ಅಧಿಸೂಚಿಸಿರುವ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಅಥವಾ 3ಬಿ ಯ ಜಾತಿಗೆ ಸೇರಿರಬೇಕು.
- ಅಭ್ಯರ್ಥಿಯ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ ರೂ.6.00 ಲಕ್ಷಗಳು.
- ಜಾತಿ ಮತ್ತು ಆದಾಯ ಪ್ರಮಾಣ ಪತ್ರವು ಕಡ್ಡಾಯವಾಗಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಯ ಹೆಸರಿನಲ್ಲಿಯೇ ಇರಬೇಕು.
- ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸದರಿ ಪರೀಕ್ಷಾ ಪೂರ್ವ ತರಬೇತಿಗಳನ್ನು ಪಡೆಯಲು ಇಚ್ಛಿಸುವ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ/10ನೇ ತರಗತಿಯನ್ನು ಪೂರ್ಣಗೊಳಿಸಿರಬೇಕು.
- ಸದರಿ ಪರೀಕ್ಷಾ ಪೂರ್ವ ತರಬೇತಿಯನ್ನು ಖಾಸಗಿ ಸಂಸ್ಥೆಗಳ ಮೂಲಕ ನೀಡಲಾಗುವುದು. ತರಬೇತಿಯು ಉಚಿತವಾಗಿದ್ದು, ತರಬೇತಿ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ಯಾವುದೇ ತರಬೇತಿ ಭತ್ಯೆ, ಪ್ರಯಾಣ ಭತ್ಯೆ ಹಾಗೂ ಇತರೆ ಯಾವುದೇ ಭತ್ಯೆಯನ್ನು ನೀಡಲಾಗುವುದಿಲ್ಲ.

Online ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:19.12.2022 ಸಂಜೆ 5:00ಗಂಟೆ,
ಸಹಾಯ ವಾಣಿ: 8050770004 (ಸಮಯ ಬೆಳಗ್ಗೆ 8.00 ರಿಂದ ಸಂಜೆ 8.00 ಗಂಟೆವರೆಗೆ)

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.